ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	216(204)
ಮಾನ್ಯ ಸದಸ್ಯರ ಹೆಸರು	:	ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	02-02-2021
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ	ರಾಜ್ಯದ ನಗರಸಭೆ, ಸ್ಥಳೀಯ ಸಂಸ್ಥೆಗಳಲ್ಲಿ ವೈಜ್ಞಾನಿಕವಾಗಿ ಘನತ್ಯಾಜ್ಯ ನಿರ್ವಹಣೆ ಮಾಡಲಾಗುತ್ತಿದೆಯೇ?	• ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ 6804 ವಾರ್ಡುಗಳ ಪೈಕಿ, 6681 ವಾರ್ಡುಗಳಲ್ಲಿ ಶೇ. 100 ರಷ್ಟು ಮನೆ-ಮನೆಯಿಂದ ತ್ಯಾಜ್ಯ ಸಂಗ್ರಹಿಸಲಾಗುತ್ತಿದ್ದು, 4342 ವಾರ್ಡುಗಳಲ್ಲಿ ಶೇ. 100 ರಷ್ಟು ಮೂಲದಲ್ಲಿಯೇ ತ್ಯಾಜ್ಯ ವಿಂಗಡಣೆ ಮಾಡಲಾಗುತ್ತಿದೆ. • ಪ್ರತಿದಿನ ಉತ್ಪತ್ತಿಯಾಗುತ್ತಿರುವ 11085 ಟನ್ ತ್ಯಾಜ್ಯದ ಪೈಕಿ 5838 ಟನ್ ತ್ಯಾಜ್ಯವನ್ನು ಸಂಸ್ಕರಿಸಲಾಗುತ್ತಿದೆ. • ರಾಜ್ಯದಲ್ಲಿ ಶೇ. 100 ರಷ್ಟು ಸಮಗ್ರ ಘನತ್ಯಾಜ್ಯ ವಸ್ತು ನಿರ್ವಹಣೆ ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯ ಹೆಚ್ಚುವರಿ ಮೂಲ ಸೌಕರ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಸ್ವಚ್ಛ ಭಾರತ ಯೋಜನೆ (ನಗರ) ಯಡಿ 219 ನಗರಗಳ ಡಿ.ಪಿ.ಆರ್. ಗಳಿಗೆ ಅನುಮೋದನೆ ನೀಡಲಾಗಿದ್ದು, ಈ ಪೈಕಿ 938 ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದು ಉಳಿಕೆ 2926 ಕಾಮಗಾರಿಗಳು ಟೆಂಡರ್ ಹಂತದಲ್ಲಿರುತ್ತವೆ.
ಆ	ನಗರಸಭೆ, ಸ್ಥಳೀಯ ಸಂಸ್ಥೆಗಳಲ್ಲಿ ಎಷ್ಟು ಪ್ರಮಾಣದ ಘನತ್ಯಾಜ್ಯ ಘಟಕಗಳು ಕಾರ್ಯನಿರ್ವಹಿಸುತ್ತಿವೆ. (ವಿವರ ನೀಡುವುದು)	• 223 ನಗರ ಸ್ಥಳೀಯ ಸಂಸ್ಥೆಗಳಲ್ಲಿ ತ್ಯಾಜ್ಯ ನಿರ್ವಹಣೆಗೆ ಜಾಗ ಲಭ್ಯವಿದ್ದು, 198 ನಗರಗಳಲ್ಲಿ ತ್ಯಾಜ್ಯ ಸಂಸ್ಕರಣೆಗೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಲಾಗಿರುತ್ತದೆ. • ಸದರಿ ಘಟಕಗಳ ಸಂಸ್ಕರಣಾ ಸಾಮರ್ಥ್ಯ ಸುಮಾರು 9000 ಟಿ.ಪಿ.ಡಿ. ರಷ್ಟಿದ್ದು, ಪ್ರಸ್ತುತ 5838 ಟಿ.ಪಿ.ಡಿ. ಯಷ್ಟು ತ್ಯಾಜ್ಯ ಸಂಸ್ಕರಣೆ ಮಾಡಲಾಗುತ್ತಿದೆ.
ಇ	ಇದಕ್ಕಾಗಿ ಕಳೆದ 3 ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆ ಮಾಡಲಾದ ಅನುದಾನವೆಷ್ಟು. ಈ ಅನುದಾನದಲ್ಲಿ ಬಳಕೆ ಮಾಡಲಾದ ಹಣ ಎಷ್ಟು? (ವಿವರಗಳನ್ನು ನೀಡುವುದು).	• ಕಳೆದ ಮೂರು ವರ್ಷಗಳಲ್ಲಿ (ಸ್ವಚ್ಛ ಭಾರತ್ ಮಿಷನ್ (ನಗರ) ಅಡಿಯಲ್ಲಿ) ಘನತ್ಯಾಜ್ಯ ನಿರ್ವಹಣೆಗೆ ಬಿಡುಗಡೆ ಮಾಡಿರುವ ಹಾಗೂ ಖರ್ಚಾದ ಮೊತ್ತದ ವಿವರ ಈ ಕೆಳಕಂಡಂತಿದೆ. (ರೂ ಕೋಟಿಗಳು) ಸಾಲು / ಬಿಡುಗಡೆ / ಖರ್ಚು 2017-18 / 0 / 0 2018-19 / 2.33 / 2.33 2019-20 / 183.41 / 81.95 ಒಟ್ಟು / 185.74 / 84.28

ಸಂಖ್ಯೆ: ನಅಇ 20 ಸಿಎಸ್ಎಸ್ 2021

[ಎನ್. ನಾಗರಾಜ್ (ಎಂ.ಟಿ.ಬಿ.)]
ಪೌರಾಡಳಿತ ಹಾಗೂ ಸಕ್ಕರೆ ಸಚಿವರು.